**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 654
ಮಾನ್ಯ ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ
ಉತ್ತರಿಸುವ ದಿನಾಂಕ : 13-12-2024
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅನೇಕ ವರ್ಷಗಳಿಂದ "ರಾಣೆಯಾರ್" ಸಮುದಾಯವು ಪರಿಶಿಷ್ಟ ಜಾತಿ ಮೀಸಲಾತಿ ನಿಯಮದಡಿ ಸೌಲಭ್ಯಗಳನ್ನು ಪಡೆದು ಕೊಳ್ಳುತ್ತಿದ್ದು, ಕಳೆದ 3-4 ವರ್ಷಗಳಿಂದ ಸದರಿ ""ರಾಣೆಯಾರ್" ಸಮುದಾಯವನ್ನು ತೆಗೆದು ಹಾಕಲಾಗಿರುವುದರಿಂದ ಈ ಸಮುದಾಯಕ್ಕೆ ಯಾವುದೇ ನಿಗಮದಿಂದಲೂ ಸೌಲಭ್ಯಗಳು ದೊರೆಯದೆ, ಸಂಕಷ್ಟಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; | ಬಂದಿದೆ.<br>ರಾಣೆಯಾರ್ ಸಮುದಾಯವು ಪರಿಶಿಷ್ಟ ಜಾತಿ ಪಟ್ಟಿಯ ಕ್ರ.ಸಂ. (92)ರಲ್ಲಿ ನಮೂದಿಸಲಾಗಿರುತ್ತದೆ. ಸದರಿ ಸಮುದಾಯವನ್ನು ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯವನ್ನು ಪಡೆಯಲು ನಿಗಮದ ವ್ಯಾಪ್ತಿಯಲ್ಲಿ ಸೇರಿಸಲಾಗಿದೆ. ಸಮಾಜ ಕಲ್ಯಾಣ ಇಲಾಖೆಯಲ್ಲಿ ಆದಿಜಾಂಬವ ನಿಗಮ ಪ್ರಾರಂಭಗೊಂಡ ಅವಧಿಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸಾಲ/ ಸಹಾಯಧನ ಸೌಲಭ್ಯ ಪಡೆಯುಲು ಸೇವಾ ಸಿಂಧು ಪೋರ್ಟಲ್ ನಲ್ಲಿ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಕರೆಯುವ ಸಂದರ್ಭದಲ್ಲಿ ಸದರಿ ಸಮುದಾಯದವರನ್ನು ಸಾಲ ಸಹಾಯಧನ ಸೌಲಭ್ಯಕ್ಕಾಗಿ ಪರಿಗಣಿಸಿರುವುದಿಲ್ಲ.<br>ಆದರೆ, 2024-25ನೇ ಸಾಲಿಗೆ ರಾಣೆಯಾರ್ ಸಮುದಾಯದವರು ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸಾಲ/ಸಹಾಯಧನ ಸೌಲಭ್ಯ ಪಡೆಯುಲು ಸೇವಾಸಿಂಧು ಪೋರ್ಟಲ್ ನಲ್ಲಿ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಸದರಿ ಸಮುದಾಯದ ಫಲಾನುಭವಿಗಳು ನಿಗಮದಲ್ಲಿನ ಯೋಜನೆಗಳಿಗೆ ಅರ್ಜಿಗಳನ್ನು ಸಲ್ಲಿಸಿ ಸಾಲ/ಸಹಾಯಧನ ಸೌಲಭ್ಯವನ್ನು ಪಡೆಯಬಹುದಾಗಿರುತ್ತದೆ. |
| ಆ) | ಬಂದಿದ್ದಲ್ಲಿ, "ರಾಣೆಯಾರ್" ಸಮುದಾಯದ ಹೆಸರು ಈ ಹಿಂದೆ "ಅಂಬೇಡ್ಕರ್ ಅಭಿವೃದ್ಧಿ ನಿಗಮ"ದಲ್ಲಿ ದಾಖಲಾಗಿದ್ದನ್ನು ತೆಗೆದು ಹಾಕಲು ಕಾರಣಗಳೇನು ; | |
| ಇ) | ಕೂಲಿ ಕಾರ್ಮಿಕರಾಗಿ ದುಡಿದು, ಅತ್ಯಂತ ಬಡತನದಲ್ಲಿಯೇ ಜೀವನ ನಡೆಸುತ್ತಿರುವ ರಾಣೆಯಾರ್ ಸಮುದಾಯವನ್ನು ಪರಿಶಿಷ್ಟ ಜಾತಿ/ ಪಂಗಡದ ಹೆಚ್ಚು ಸೌಲಭ್ಯಗಳಿರುವ ಸರ್ಕಾರದ ನಿಗಮದಲ್ಲಿ ಮರು ಸೇರ್ಪಡೆಗೊಳಿಸಲು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ? | |

ಸಕಇ 7 ಆರ್‌ಐ 2024

(ಡಾ. ಹೆಚ್.ಸಿ ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು.